ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

<u>ಸಿ.ಸಿ. ಸಂಖ್ಯೆಃ **599/2021**</u>

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ **1.** ನಿಂಗರಾಜು @ ಮಂಟ
ತಂದೆ - ಲೇಟ್ ಮಂಟಯ್ಯ
ಸುಮಾರು **29** ವರ್ಷ ವಯಸ್ಸು,
ಹುಲ್ಯಾಳು ಗ್ರಾಮ,
ಗಾವಡಗೆರೆ ಹೋಬಳಿ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

## <u>ದೋಷಾರೋಪಣೆ</u>

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ದಿನಾಂಕ 03.10.2019 ರಂದು ಮಧ್ಯಾಹ್ನ 2.00 ಗಂಟೆ ಸಮಯದಲ್ಲಿ ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಹುಣಸೂರು ತಾಲ್ಲೂಕು ಗಾವಡಗೆರೆ ಹೋಬಳಿ, ಹುಲ್ಯಾಳು ಗ್ರಾಮದ ವಾಸಿಯಾದ ಸಾಕ್ಷಿ -1 ಅವರ ವಾಸದ ಮನೆಗೆ ಯಾರೂ ಇಲ್ಲದ ವೇಳೆಯಲ್ಲಿ ಮನೆಯ ಬಾಗಿಲಿಗೆ ಹಾಕಿದ್ದ ಬೀಗವನ್ನು ಕಬ್ಬಿಣದ ರಾಡಿನಿಂದ ಮೀಟಿ ಮನೆಯ ಒಳಗೆ ಅತಿಕ್ರಮ ಪ್ರವೇಶ ಮಾಡಿರುತ್ತೀರೆಂದು, ಆ

ಮೂಲಕ ಭಾರತೀಯ ದಂಡ ಸಂಹಿತೆ ಕಲಂ 454 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಸಾಕ್ಷಿ 1 ಅವರ ಮನೆಗೆ ಅತಿಕ್ರಮ ಪ್ರವೇಶ ಮಾಡಿ ಮನೆಯ ಮಲಗುವ ಕೋಣೆಯಲ್ಲಿರಿಸಿದ್ದ ಬೀರುವಿನ ಬಾಗಿಲನ್ನು ತೆಗೆದು ಬೀರುವಿನಲ್ಲಿಟ್ಟಿದ್ದ ಸುಮಾರು 18,000/- ರೂ ಬೆಲೆ ಬಾಳುವ 10 ಗ್ರಾಂ ತೂಕದ ಚಿನ್ನದ ಬ್ರೇಸ್ ಲೇಟನ್ನು ಮತ್ತು 8,000/- ರೂ ಹಣವನ್ನು ಕಳ್ಳತನ ಮಾಡಿಕೊಂಡು ಹೋಗಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 380 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ಪೂಜಾ ಬೆಳಕೇರಿ)**

ದಿನಾಂಕ: **18.01.2024**

ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 599/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ 1. ನಿಂಗರಾಜು @ ಮಂಟ
ತಂದೆ - ಲೇಟ್ ಮಂಟಯ್ಯ

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ**?**

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ**,** ವಿಚಾರಣೆಯಾಗಬೇಕೆನ್ನುವಿರೋ**?**

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)

ದಿನಾಂಕಃ **18.01.2024**

ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದಂ.ನ್ಯಾ.. ದಂಡಾಧಿಕಾರಿಗಳು, ಹುಣಸೂರು.